3) ಹೆಸರುಗಳನ್ನು ಸೇರ್ಪಡೆ ಮಾಡಿಕೊಳ್ಳಲು ಯಾವ ಕ್ರಮಗಳನ್ನು ಅನುಸರಿಸಲಾಗಿದೆ?

ಶ್ರೀ ಮಿರಾಜುದ್ದೀನ್ ಎನ್.ಪಾಟೀಲ್ (ಸೌರಾಡಳಿತ ಸಚಿವರು):-

1) ಹೌದು.

2)

ಅರಕಲಗೂಡುವಾರ್ಡ್ ಸಂಖ್ಯೆ	ಮತದಾರರ ಸಂಖ್ಯೆ
01	33
02	30
03	-
04	42
05	02
06	10
07	19
08	27
09	-
10	58
11	12
12	75
13	14
14	44
	ಒಟ್ಟು : 366

3) ಕರ್ನಾಟಕ ರಿಜಿಸ್ಟ್ರೇಷನ್ ಆಫ್ ಎಲೆಕ್ಟರ್ಸ್ ನಿಯಮ 1960ರ ಅನ್ವಯ ಕ್ರಮ ಅನುಸರಿಸಲಾಗಿದೆ.

ವಿಷಯ:- ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಇ.ಪಿ.ಐ. ಪಾರ್ಕ್.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 200 (422)

ಶ್ರೀ ಯು.ಆರ್.ಸಭಾಪತಿ (ಉಡುಪಿ):- ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಮತ್ತು ಮೂಲಭೂತ ಸೌಕರ್ಯಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಇ.ಪಿ.ಐ ಪಾರ್ಕ್ ಮಾಡುವ ಉದ್ದೇಶ ಸರ್ಕಾರದ ಪರಿಶೀಲನೆಯಲ್ಲಿದೆಯೇ?

ಆ) ಹಾಗಿದ್ದಲ್ಲಿ ಈ ಬಗ್ಗೆ ಬೇಕಾಗುವ ಸ್ಥಳವನ್ನು ಸ್ವಾಧೀನಪಡಿಸಲಾಗಿದೆಯೇ?

ಇ) ಸ್ವಾಧೀನಪಡಿಸಕೊಂಡಿದ್ದಲ್ಲಿ ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಆರ್.ವಿ.ದೇಶಪಾಂಡೆ (ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಮತ್ತು ಮೂಲಭೂತ ಸೌಕರ್ಯಾಭಿವೃದ್ಧಿ ಸಚಿವರು):-

ಅ) ಹೌದು.

ಆ) ಇದಕ್ಕಾಗಿ ದಕ್ಷಿಣ ಕನ್ನಡ ಜಿಲ್ಲೆಯ ಕುಳಾಯಿ ಮತ್ತು ತೋಕೂರು ಗ್ರಾಮಗಳಲ್ಲಿ ಭೂ ಸ್ವಾಧೀನಪಡಿಸಿಕೊಳ್ಳಲಾಗುತ್ತಿದೆ.

ಇ) ಈ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲು ಇನ್ನೂ ಅಂತಿಮ ಅಧಿಸೂಚನೆ ಹೊರಡಿಸಬೇಕಾಗಿದೆ. ಅಂತಿಮವಾಗಿ ಭೂಸ್ವಾಧೀನಪಡಿಸಕೊಂಡ ನಂತರ ಈ ಬಗ್ಗೆ ಮುಂದಿನ ಕ್ರಮ ಕೈಗೊಳ್ಳಲಾಗುವುದು. ಈ ಮಧ್ಯೆ ಯೋಜನಾ ವರದಿಯನ್ನು ತಯಾರಿಸಲಾಗುತ್ತದೆ.

ವಿಷಯ:- ಪುತ್ತೂರು ನಗರದಲ್ಲಿರುವ ಟೌನ್ ಹಾಲ್ ಕಟ್ಟಡಕ್ಕೆ ಸರ್ಕಾರದಿಂದ 5 ಲಕ್ಷ ಮಂಜೂರು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 201 (492)

ಶ್ರೀ ಡಿ.ವಿ.ಸದಾನಂದಗೌಡ (ಪುತ್ತೂರು):- ಮಾನ್ಯ ಪೌರಾಡಳಿತ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

1) ಪುತ್ತೂರು ನಗರದಲ್ಲಿರುವ ಟೌನ್ ಹಾಲ್ ಕಟ್ಟಡಕ್ಕೆ ಸರ್ಕಾರದಿಂದ 5.00 ಲಕ್ಷ ರೂಪಾಯಿ ಬಿಡುಗಡೆ ಮಾಡುವಂತೆ ಈ ಹಿಂದೆ ಮುಖ್ಯಮಂತ್ರಿಯವರು ಆದೇಶಿಸಿರುವುದು ನಿಜವೆ? ಹಾಗಿದ್ದಲ್ಲಿ ಈ ಮೊತ್ತವನ್ನು ಪಾವತಿಸದಿರಲು ಕಾರಣವೇನು?

2) ಈಗಲಾದರೂ ಮುಕ್ತಾಯ ಕಾಣದ ಈ ಟೌನ್‌ಹಾಲ್‌ಗೆ ಸರ್ಕಾರದವರು ಸಹಾಯಧನ ಕೊಡುವ ಇರಾದೆಯಲ್ಲಿದೆಯೇ? ಹಾಗಿದ್ದಲ್ಲಿ ಯಾವಾಗ ಈ ಮೊತ್ತವನ್ನು ಬಿಡುಗಡೆ ಮಾಡಲಾಗುವುದು?